# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ 2014-15ನೇ ಸಾಲಿನ 1ನೇ ತ್ರೈಮಾಸಿಕ ಯೋಜನಾ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-**

ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಇವರ ದಿನಾಂಕ 10-04-2014ರ ಪತ್ರ ಸಂಖ್ಯೆ: ಹನಿಅ/ಕೃತೋವಿವಿಶಿ/28/2014-15.

**ಪ್ರಸ್ತಾವನೆ:-**

ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದ ಯೋಜನೆ ಉದ್ದೇಶಗಳಿಗಾಗಿ 2014-15ನೇ ಸಾಲಿನ ಆಯವ್ಯಯದಲ್ಲಿ ರಾಜ್ಯ ಸರ್ಕಾರವು ಸಹಾಯಾನುದಾನ-ವೇತನ ಲೆಕ್ಕಶೀರ್ಷಿಕೆ 2415-80-277-05-01-101 ಅಡಿಯಲ್ಲಿ ರೂ. 360.00 ಲಕ್ಷಗಳು, ಸಹಾನಯದಾನ ಆಸ್ತಿಗಳ ಸೃಜನೆ ಲೆಕ್ಕ ಶೀರ್ಷಿಕೆ 2415-80-277-05-01-102 ಅಡಿಯಲ್ಲಿ 1200.00 ಲಕ್ಷಗಳು ಹಾಗೂ ಸಹಾನಯದಾನ ಸಾಮಾನ್ಯ ಲೆಕ್ಕಶೀರ್ಷಿಕೆ 2415-80-277-05-01-103 ಅಡಿಯಲ್ಲಿ ರೂ. 2940.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ. ಮೇಲೆ ಓದಲಾದ ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದ ಹಣಕಾಸು ನಿಯಂತ್ರಣಾಧಿಕಾರಿಗಳ ಪತ್ರದೊಂದಿಗೆ ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನಲ್ಲಿ ಯೋಜನೆ ಉದ್ದೇಶಗಳಿಗೆ ಬಿಡುಗಡೆ ಮಾಡಲಾದ ಅನುದಾನದ ಬಳಕೆ ಪ್ರಮಾಣ ಪತ್ರವನ್ನು ಒದಗಿಸುತ್ತಾ, 2014-15ನೇ ಸಾಲಿನಲ್ಲಿ ಸಹಾಯಾನುದಾನ-ವೇತನ ಲೆಕ್ಕಶೀರ್ಷಿಕೆ 2415-80-277-05-01-101 ಅಡಿಯಲ್ಲಿ ರೂ. 360.00 ಲಕ್ಷಗಳಲ್ಲಿ ರೂ.90.00 ಲಕ್ಷಗಳನ್ನು, ಸಹಾನುಯದಾನ ಆಸ್ತಿಗಳ ಸೃಜನೆ ಲೆಕ್ಕ ಶೀರ್ಷಿಕೆ 2415-80-277-05-01-102 ಅಡಿಯಲ್ಲಿ ರೂ.1200.00 ಲಕ್ಷಗಳಲ್ಲಿ, ರೂ.300.00 ಲಕ್ಷಗಳನ್ನು ಹಾಗೂ ಸಹಾನುಯದಾನ ಸಾಮಾನ್ಯ ಲೆಕ್ಕಶೀರ್ಷಿಕೆ 2415-80-277-05-01-103 ಅಡಿಯಲ್ಲಿ ರೂ.2940.00 ಲಕ್ಷಗಳಲ್ಲಿ ರೂ.735.00 ಲಕ್ಷಗಳಂತೆ ಒಟ್ಟು ರೂ 1125.00 ಲಕ್ಷಗಳನ್ನು ಮೊದಲನೇ ತ್ರೈಮಾಸಿಕ ಯೋಜನೆ ಅನುದಾನವಾಗಿ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ ಕೃಇ 09 ಕೃವಿಶಿ 2014, ಬೆಂಗಳೂರು, ದಿನಾಂಕ 14-05-2014

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ 2014-15ನೇ ಸಾಲಿಗೆ ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ ಯೋಜನೆಯ ಸಹಾಯಾನುದಾನ-ವೇತನ ಲೆಕ್ಕಶೀರ್ಷಿಕೆ

2415-80-277-05-01-101 ಅಡಿಯಲ್ಲಿ ರೂ. 360.00 ಲಕ್ಷಗಳಲ್ಲಿ ರೂ.90.00 ಲಕ್ಷಗಳನ್ನು, ಸಹಾನುಯದಾನ ಆಸ್ತಿಗಳ ಸೃಜನೆ ಲೆಕ್ಕ ಶೀರ್ಷಿಕೆ 2415-80-277-05-01-102 ಅಡಿಯಲ್ಲಿ ರೂ.1200.00 ಲಕ್ಷಗಳಲ್ಲಿ, ರೂ.300.00 ಲಕ್ಷಗಳನ್ನು ಹಾಗೂ ಸಹಾನುಯದಾನ ಸಾಮಾನ್ಯ ಲೆಕ್ಕಶೀರ್ಷಿಕೆ 2415-80-277-05-01-103 ಅಡಿಯಲ್ಲಿ ರೂ.2940.00 ಲಕ್ಷಗಳಲ್ಲಿ ರೂ.735.00 ಲಕ್ಷಗಳಂತೆ ಒಟ್ಟು ರೂ 1125.00 ಲಕ್ಷಗಳನ್ನು (ಒಂದು ಸಾವಿರದ ಒಂದು ನೂರ ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ) ಮೊದಲನೇ ತ್ರೈಮಾಸಿಕ ಯೋಜನೆ ಅನುದಾನವಾಗಿ ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

1. ಪ್ರತಿ ತಿಂಗಳ ಅನುದಾನವನ್ನು ಆಯಾ ತಿಂಗಳ 20ನೇ ತಾರೀಕಿನಂದು ಅಥವಾ 20ನೇ ತಾರೀಕಿನ ನಂತರ ಹಿಂದಿನ ತಿಂಗಳ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು;
2. ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;
3. ಬಿಡುಗಡೆಯಾದ ಯೋಜನಾನುದಾನದ ಸಂಶೋದನಾ ಪೈಕಿ ಶೇ. 50ರಷ್ಟು ಹಣವನ್ನು ಸಂಶೋದನೆ ಮತ್ತು ಅಭಿವೃದ್ಧಿ ಉದ್ದೇಶಗಳಿಗೆ ವಿನಿಯೋಗಿಸತಕ್ಕದ್ದು.
4. ಸರ್ಕಾರವು ನೀಡಿದ ಸೂಚನೆ, ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ಯೋಜನೆಯ ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;
5. ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;
6. ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;
7. ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ, ಇವರಿಗೆ ನೀಡಲಾಗಿದೆ.

3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 3 ಟಿಎಫ್‌ಪಿ 2014, ದಿನಾಂಕ:04-04-2014ರಲ್ಲಿ ಆಡಳಿತಾತ್ಮಕ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರ ಮತ್ತು ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ದಿ: 08-05-2014ರ ಟಿಪ್ಪಣಿ ಸಂಖ್ಯೆ: ಕೃಇ 85 ಆಂಆಸ 2014ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಸೇವೆಗಳು)

<u>ಇವರಿಗೆ:-</u>

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಖೆ) ಬೆಂಗಳೂರು.
2. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
3. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮೇನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
6. ಜಿಲ್ಲಾ ಖಜಾನಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
7. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
8. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.